195

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ಪ್ರತಿಜ್ಞಾ ಸಸ್ಟೈನೆಬಲ್ ಸಲೂಷನ್ಸ್ ಪ್ರೈವೇಟ್ ಲಿಮಿಟೆಡ್, ಇವರಿಗೆ 4.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆ ಹಂಚಿಕೆ ಮಾಡುವ ಬಗ್ಗೆ.

ಓದಲಾಗಿದೆ: 1 ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ:KRED/08/PSSPL-4 MW/Madanayakanahalli/2014/4221ದಿನಾಂಕ: 18.10.2014.

2 ದಿನಾಂಕ: 02.12.2014 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

636
7/3/15

* * *

ಪ್ರಸ್ತಾವನೆ :-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ: ಪ್ರತಿಜ್ಞಾ ಸಸ್ಟೈನೆಬಲ್ ಸಲೂಷನ್ಸ್ ಪ್ರೈವೇಟ್ ಲಿಮಿಟೆಡ್, ಕಂಪನಿಯವರಿಗೆ ರಾಯಚೂರು ಜಿಲ್ಲೆಯ, ಸಿಂಧನೂರು ತಾಲ್ಲೂಕಿನ ಮುಳ್ಳೂರು (ಉ) ಮತ್ತು ವೀರಾಪುರ ಗ್ರಾಮಗಳಲ್ಲಿ 4 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಕುರಿತು ಸರ್ಕಾರಕ್ಕೆ ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಹಂಚಿಕೆ ಸಮಿತಿ ಸಭೆಯ ನಡವಳಿಯ ಕ್ರಮ ಸಂಖ್ಯೆ 1 (3) ರಲ್ಲಿ ಮೆ: ಪ್ರತಿಜ್ಞಾ ಸಸ್ಟೈನೆಬಲ್ ಸಲೂಷನ್ಸ್ ಪ್ರೈವೇಟ್ ಲಿಮಿಟೆಡ್, ಕಂಪನಿಯವರಿಗೆ ರಾಯಚೂರು ಜಿಲ್ಲೆಯ, ಸಿಂಧನೂರು ತಾಲ್ಲೂಕಿನ ಮುಳ್ಳೂರು (ಉ) ಮತ್ತು ವೀರಾಪುರ ಗ್ರಾಮಗಳಲ್ಲಿ 4 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸಲು ಸದರಿ ಸಾಮರ್ಥ್ಯಕ್ಕೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಈಗಾಗಲೇ ಕ್ರೆಡಲ್‌ಗೆ ಸಲ್ಲಿಸಿರುವುದನ್ನು ಪರಿಗಣಿಸಿ, ಸದರಿಯವರಿಗೆ 4 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲು ಸಮಿತಿಯು ಶಿಫಾರಸ್ಸು ಮಾಡಿರುತ್ತದೆ. ಆದುದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ : –

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 243 ಎನ್‌ಸಿಇ 2014,**
**ಬೆಂಗಳೂರು, ದಿನಾಂಕ : 26.02.2015.**

ಮೆ: ಪ್ರತಿಜ್ಞಾ ಸಸ್ಟೈನೆಬಲ್ ಸಲೂಷನ್ಸ್ ಪ್ರೈವೇಟ್ ಲಿಮಿಟೆಡ್ (M/s Prathijna Sustainable Solutions Private Limited) ಕಂಪನಿಯವರಿಗೆ ರಾಯಚೂರು ಜಿಲ್ಲೆಯ, ಸಿಂಧನೂರು ತಾಲ್ಲೂಕಿನ ಮುಳ್ಳೂರು (ಉ) ಮತ್ತು ವೀರಾಪುರ ಗ್ರಾಮಗಳಲ್ಲಿ 4.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ನಿಬಂಧನೆಗೊಳಪಟ್ಟು ಹಂಚಿಕೆ ಮಾಡಿದೆ:-

---2)

Wind Sectior
vard No. 15162
Date: 11-03-15
Sig.

- iaH



| Sl. No | Toposheet No. | Village Name | Taluk / District | WTG Capacity in MW | Land Survey number | WTG's No. | Latitude and Longitude |
|---|---|---|---|---|---|---|---|
| 1 | 57A/5 | Mullur (U) | Sindhanur / Raichur | 1.0 | 58 | MLR 001 | Lat: 15°48′23.62″ N Long: 76°26′10.48″ E |
| 2 | | Mullur (U) | Sindhanur / Raichur | 1.0 | 45 | MLR 002 | Lat: 15°48′14.62″ N Long: 76°26′28.50″ E |
| 3 | | Mullur (U) | Sindhanur / Raichur | 1.0 | 38 | MLR 003 | Lat: 15°48′12.16″ N Long: 76°26′55.43″ E |
| 4 | | Wirapur | Sindhanur / Raichur | 1.0 | 48 | MLR 004 | Lat: 15°48′5.84″ N Long: 76°26′11.72″ E |
| | | Total | | 4.0 | | | |

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಆದೇಶ ತಂತಾನೆ ರದ್ದಾಗಿದೆ ಎಂದು ಭಾವಿಸುವುದು.

2. ಒಡಂಬಡಿಕೆಯನ್ನು ಮಾಡಿಕೊಳ್ಳುವ ಮೊದಲು ಯೋಜನಾ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ವಿವರವಾದ ಯೋಜನಾ ವರದಿಯನ್ನು (ಡಿ.ಪಿ.ಆರ್) ಪರಿಷ್ಕರಿಸಲು ಮೆಗಾ ವ್ಯಾಟ್ ಒಂದಕ್ಕೆ ಸರ್ಕಾರದ ಆದೇಶಾನುಸಾರ ವಿವರವಾದ ಯೋಜನಾ ವರದಿ ಪರಿಷ್ಕರಣಾ ಶುಲ್ಕವನ್ನು ತುಂಬುವುದು.

3. ಹಂಚಿಕೆದಾರರು ಪೂರ್ತಿ ಒಂದು ಪವನ ವರ್ಷಕ್ಕೆ ಕಡಿಮೆ ಇಲ್ಲದಂತೆ 10 ಮೀಟರ್ ಮತ್ತು ಹಬ್ ಹೈಟ್ ಮಟ್ಟದಲ್ಲಿ ಪವನ ವೇಗದ ಅಳತೆಯನ್ನು ಮಾಡಿಕೊಳ್ಳಬೇಕು. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದಿಂದ ಹೊರಡಿಸತಕ್ಕ ಮಾರ್ಗಸೂಚಿಗಳಿಗನುಗುಣವಾಗಿ ಮೈಕ್ರೊ ಸೈಟಿಂಗ್ ಮಾಡಿರುವ ಅಂಶಗಳನ್ನೊಳಗೊಂಡ ವಿವರವಾದ ಯೋಜನಾ ವರದಿಯನ್ನು ಒಂದು ವರ್ಷದಲ್ಲಿ ತಯಾರಿಸಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ತ್ರಿಪ್ರತಿಗಳಲ್ಲಿ ಸಲ್ಲಿಸಬೇಕು. ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

4. ಗಾಳಿ ಚಕ್ರದ ಹಬ್ ಹೈಟಿನಲ್ಲಿ ಪವನ ವೇಗದ ಅಳತೆ ಖಾತರಿ ಪಡಿಸಲು ಕೆಳಗಿನ ಕೋಷ್ಟಕದಲ್ಲಿ ವಿವರಿಸಿರುವಂತೆ ಪ್ರತಿ 5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಒಂದರಂತೆ ಗಾಳಿ ಕಂಬವನ್ನು (ವಿಂಡ್ ಮಾಸ್ಟ್) ಅಳವಡಿಸಬೇಕು. ಅಳತೆ ವಿವರಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸುವುದು.

---3)

193

| ಗಾಳಿ ಶಕ್ತಿ ವಿದ್ಯುತ್ತಿನ ದೂರ ಸಾಮರ್ಥ್ಯ | 5 ಮೆಗಾವ್ಯಾಟ್ ಗಾಳಿ ಯೋಜನೆಯಲ್ಲಿ ಸಾಧಾರಣ ಗಾಳಿ ಶಕ್ತಿ ವಿದ್ಯುತ್ತಿನ ಸಂಖ್ಯೆ | ಹಾಕಬೇಕಾಗಿರುವ ಗಾಳಿ ಕಂಬ (ವಿಂಡ್ ಮಾಸ್ಟ್‌ಗಳ ಸಂಖ್ಯೆ |
|---|---|---|
| > 200 ಕಿ.ವ್ಯಾ. ನಿಂದ 300 ಕಿ.ವ್ಯಾ. | 18 | 1 |
| > 300 ಕಿ.ವ್ಯಾ. ನಿಂದ 500 ಕಿ.ವ್ಯಾ. | 15 | 1 |
| > 500 ಕಿ.ವ್ಯಾ. ನಿಂದ 750 ಕಿ.ವ್ಯಾ. | 12 | 1 |
| > 750 ಕಿ.ವ್ಯಾ. ನಿಂದ 1000 ಕಿ.ವ್ಯಾ. | 8 ರಿಂದ 10 | 1 |

5. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
6. ಶಾಸನಬದ್ಧ ಅನುಮೋದನೆ ಅವಶ್ಯಕತೆ ಇರುವ ಇಲಾಖೆ/ನಿಗಮಗಳಿಂದ ಅಂದರೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ, ಕಂದಾಯ ಇಲಾಖೆ ಮತ್ತು ಇತರೆ ಸಂಬಂಧಿಸಿದ ಇಲಾಖೆಗಳ ಕ್ಲಿಯರೆನ್ಸ್‌ಗಳನ್ನು ಈ ಹೆಚ್ಚುವರಿ ಸಾಮರ್ಥ್ಯಕ್ಕೂ ಸಹ ಪಡೆಯತಕ್ಕದ್ದು.
7. ಅಭಿವೃದ್ಧಿದಾರರು ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನೀತಿ ನಿಯಮಾನುಸಾರ ವಿದ್ಯುತ್ ಖರೀದಿ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
8. ಸರ್ಕಾರಿ ಆದೇಶ ಸಂ:ಇಎನ್ 95 ಇಬಿಎಸ್ 2009 ದಿ:29.12.2009ರನ್ವಯ ವಿನಾಯಿತಿ ಸೌಲಭ್ಯಗಳು ಅನ್ವಯಿಸುವುದು.
9. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
10. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎ 22034674.

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

---4)